**All India Radio: Bangalore**
**National Bulletin In Kannada**
**11.09.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.09.2025 07.35 a.m.**
**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಇಂದು ಉತ್ತರಪ್ರದೇಶ-ಉತ್ತರಾಖಂಡ ಭೇಟಿ ; ವಾರಾಣಸಿಯಲ್ಲಿ ಮಾರಿಷಸ್ ಪ್ರಧಾನಿಯೊಂದಿಗೆ ದ್ವಿಪಕ್ಷೀಯ ಮಾತುಕತೆ
2. ೨೦೩೦ರ ವೇಳೆಗೆ ಭಾರತ ಶೇಕಡ ೩೦ರಷ್ಟು ವಿದ್ಯುತ್ ವಾಹನಗಳನ್ನು ಹೊಂದುವ ಗುರಿ - ಸಚಿವ ಪ್ರಲ್ಹಾದ್ ಜೋಶಿ
3. ಅಮೆರಿಕದೊಂದಿಗೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಅಂತಿಮಗೊಳಿಸುವ ನಿಟ್ಟಿನಲ್ಲಿ ಸಕ್ರಿಯ ಸಮಾಲೋಚನೆ - ಸಚಿವ ಪಿಯೂಷ್ ಗೋಯಲ್
4. ಏಷ್ಯಾಕಪ್ ಕ್ರಿಕೆಟ್ ; ಯುಎಇ ವಿರುದ್ಧ ಭಾರತಕ್ಕೆ ೯ ವಿಕೆಟ್‌ಗಳ ಭರ್ಜರಿ ಗೆಲುವು

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಉತ್ತರ ಪ್ರದೇಶ ಮತ್ತು ಉತ್ತರಾಖಂಡಕ್ಕೆ ಭೇಟಿ ನೀಡಲಿದ್ದಾರೆ. ಭಾರತ ಪ್ರವಾಸದದಲ್ಲಿರುವ ಮಾರಿಷಸ್ ಪ್ರಧಾನಿ ನವೀನಚಂದ್ರ ರಾಮಗೂಲಮ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ವಾರಾಣಸಿಯಲ್ಲಿ ಆತಿಥ್ಯ ನೀಡಲಿದ್ದಾರೆ. ಪ್ರಧಾನಿ ರಾಮಗೂಲಮ್ ನಿನ್ನೆ ಸಂಜೆ ವಾರಣಾಸಿಗೆ ಆಗಮಿಸಿದರು, ಅಲ್ಲಿ ಅವರನ್ನು ಉತ್ತರ ಪ್ರದೇಶ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಸ್ವಾಗತ ಮತ್ತು ಗೌರವ ರಕ್ಷೆಯೊಂದಿಗೆ ಬರಮಾಡಿಕೊಂಡರು. ಮಾರ್ಚ್ ೨೦೨೫ರಲ್ಲಿ ಪ್ರಧಾನಿ ನರೇಂದ್ರ ಮೋದಿ ಮಾರಿಷಸ್‌ಗೆ ಭೇಟಿ ನೀಡಿದ ನಂತರ ಉಭಯ ದೇಶಗಳ ಕಾರ್ಯತಂತ್ರದ ಪಾಲುದಾರಿಕೆ ವೇಗ ಪಡೆದುಕೊಂಡಿದೆ. ಈ ಬಗ್ಗೆ ನಮ್ಮ ಪ್ರತಿನಿಧಿ ಹೆಚ್ಚಿನ ವಿವರ ನೀಡಲಿದ್ದಾರೆ.

**ಧ್ವನಿ: ಅಲೋಕ್ ರೈ (೩೫ ಸೆಕೆಂಡ್‌ಗಳು)**

ದ್ವಿಪಕ್ಷೀಯ ಚರ್ಚೆ ಸಮಯದಲ್ಲಿ, ಅಭಿವೃದ್ಧಿ ಪಾಲುದಾರಿಕೆ ಮತ್ತು ಸಾಮರ್ಥ್ಯ ವೃದ್ಧಿಯ ಮೇಲೆ ನಿರ್ದಿಷ್ಟವಾಗಿ ಗಮನಹರಿಸಿ, ಸಹಕಾರ ವೃದ್ಧಿ ಮಾರ್ಗೋಪಾಯಗಳ ಬಗ್ಗೆ ಇಬ್ಬರೂ ನಾಯಕರು ಪರಿಶೀಲಿಸುತ್ತಾರೆ. ಸಂಜೆ ನಂತರ, ಪ್ರಧಾನಿ ನರೇಂದ್ರ ಮೋದಿ ಉತ್ತರಾಖಂಡದ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ಕೈಗೊಳ್ಳಲಿದ್ದಾರೆ. ನಂತರ, ಪ್ರಧಾನಮಂತ್ರಿ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆಯ ನಡೆಸಲಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನಿನ್ನೆ ಸಂಜೆ ಇಟಲಿಯ ತಮ್ಮ ಸಹವರ್ತಿ ಜಾರ್ಜಿಯಾ ಮೆಲೋನಿ ಅವರೊಂದಿಗೆ ದೂರವಾಣಿ ಮೂಲಕ ಸಮಾಲೋಚನೆ ನಡೆಸಿದರು. ಹೂಡಿಕೆ, ರಕ್ಷಣೆ, ಭದ್ರತೆ, ಬಾಹ್ಯಾಕಾಶ, ವಿಜ್ಞಾನ ಮತ್ತು ತಂತ್ರಜ್ಞಾನ, ಶಿಕ್ಷಣ, ನಾಗರಿಕ ಸಂಬಂಧಗಳು ಮತ್ತು ಭಯೋತ್ಪಾದನೆ ನಿಗ್ರಹದಂತಹ ವಲಯಗಳಲ್ಲಿ ದ್ವಿಪಕ್ಷೀಯ ಕಾರ್ಯತಂತ್ರದ ಸಹಭಾಗಿತ್ವದಲ್ಲಿನ ಬೆಳವಣಿಗೆಗಳ ಬಗ್ಗೆ ಉಭಯ ನಾಯಕರು

ಪರಾಮರ್ಶೆ ನಡೆಸಿದರು. ೨೦೨೫-೨೬ರ ಜಂಟಿ ಕಾರ್ಯತಂತ್ರದ ಕ್ರಿಯಾ ಯೋಜನೆಗೆ ಅನುಗುಣವಾಗಿ ಪಾಲುದಾರಿಕೆಯನ್ನು ಮತ್ತಷ್ಟು ವಿಸ್ತರಿಸುವತ್ತ ಉಭಯ ನಾಯಕರು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.

<><><><>

ಭಾರತ ೨೦೩೦ರ ವೇಳೆಗೆ ಶೇ.೩೦ರಷ್ಟು ವಿದ್ಯುತ್ ವಾಹನಗಳನ್ನು ಹೊಂದುವ ಮಹತ್ವಾಕಾಂಕ್ಷೆಯ ಗುರಿಯೊಂದಿಗೆ ಸಾಗಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಕೋಲ್ಕತ್ತಾದ ಅಲಿಪೋರ್ ಪ್ರಾದೇಶಿಕ ಪ್ರಯೋಗಾಲಯದ ಅತ್ಯಾಧುನಿಕ ವಿದ್ಯುತ್ ವಾಹನ ಪರೀಕ್ಷಾ ಸೌಲಭ್ಯಕ್ಕೆ ಚಾಲನೆ ನೀಡಿ ಮಾತನಾಡಿ. ವಿದ್ಯುನ್ಮಾನ ವಾಹನಗಳಿಗೆ ಆದ್ಯತೆ ನೀಡುತ್ತಿರುವ ಕೇಂದ್ರ ಸರ್ಕಾರ ಅವುಗಳ ಪ್ರಾಯೋಗಿಕ ಪರೀಕ್ಷೆಗೂ ಮಹತ್ವ ನೀಡಿದೆ ಎಂದರು. ಭಾರತದ ಗುರಿಯನ್ನು ಬೆಂಬಲಿಸಲು ವಿದ್ಯುತ್ ವಾಹನಗಳು ಮತ್ತು ಅವುಗಳ ಘಟಕಗಳು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಾನದಂಡಗಳನ್ನು ಪೂರೈಸಲು ಕಠಿಣ ಪರೀಕ್ಷೆ, ಮೌಲ್ಯೀಕರಣ ಮತ್ತು ಪ್ರಮಾಣೀಕರಣಕ್ಕೆ ಒಳಗಾಗುವುದನ್ನು ಖಚಿತಪಡಿಸಿಕೊಳ್ಳುವುದು ಅತ್ಯಗತ್ಯ. ಸುಸ್ಥಿರ ಸಂಚಾರ ಉತ್ತೇಜಿಸುವ ಮತ್ತು ಇಂಗಾಲದ ಹೊರಸೂಸುವಿಕೆ ತಗ್ಗಿಸುವ ನಮ್ಮ ಧ್ಯೇಯಕ್ಕೆ ಬದ್ಧವಾಗಿ ಇವಿ ವಲಯ ಸಾಗುತ್ತಿದೆ ಎಂದು ಪ್ರತಿಪಾದಿಸಿದರು.

<><><><>

ಅಮೆರಿಕದೊಂದಿಗೆ ದ್ವಿಪಕ್ಷೀಯ  ವ್ಯಾಪಾರ ಒಪ್ಪಂದ ಅಂತಿಮಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಸಕ್ರಿಯವಾಗಿ ಮಾತುಕತೆಯಲ್ಲಿ ತೊಡಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದ್ವಿಪಕ್ಷೀಯ ಸಂಬಂಧಗಳ ಕುರಿತಂತೆ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು, ಸಕಾರಾತ್ಮಕ ಮಾಹಿತಿಯನ್ನು ಹಂಚಿಕೊಂಡ ಬಳಿಕ, ಸಚಿವರು ಈ ಹೇಳಿಕೆ ನೀಡಿದ್ದಾರೆ. ದೆಹಲಿಯಲ್ಲಿ ನಿನ್ನೆ ಎಫ್‌ಐಸಿಸಿಐ ಆಯೋಜಿಸಿದ್ದ ಲೀಡ್ಸ್ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಐರೋಪ್ಯ ಒಕ್ಕೂಟ ಮತ್ತು ನ್ಯೂಜಿಲೆಂಡ್ ಜೊತೆಗೂ ಸಹ ವ್ಯಾಪಾರ ಸಮಾಲೋಚನೆಗಳು ಪ್ರಗತಿಯಲ್ಲಿವೆ. ಒಮನ್ ರಾಷ್ಟ್ರದೊಂದಿಗೆ ಆದಷ್ಟು ಶೀಘ್ರ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸಲಾಗುವುದು ಎಂದು ಹೇಳಿದರು.

**ಧ್ವನಿ : ಪಿಯೂಷ್ ಗೋಯಲ್ (೧೪ ಸೆಕೆಂಡ್‌ಗಳು)**

ಇದಕ್ಕೂ ಮುನ್ನ ಉಭಯ ದೇಶಗಳ ನಡುವಿನ ವ್ಯಾಪಾರ ಬಿಕ್ಕಟ್ಟು ಬಗೆಹರಿಸುವ ಮಹತ್ವದ ಕ್ರಮವಾಗಿ ಅಧ್ಯಕ್ಷ ಡೋನಾಲ್ಡ್ ಟ್ರಂಪ್, ಭಾರತದೊಂದಿಗೆ ಸಮಾಲೋಚನೆಗಳು ಪುನಾರಂಭವಾಗಿದೆ ಎಂದು ಪ್ರಕಟಿಸಿದ್ದಾರೆ.

<><><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ನ್ಯೂ ಸ್ಪೇಸ್ ಇಂಡಿಯಾ ಲಿಮಿಟೆಡ್ - ಎನ್‌ಎಸ್‌ಐಎಲ್ ಹಾಗೂ ಭಾರತೀಯ ರಾಷ್ಟ್ರೀಯ ಬಾಹ್ಯಾಕಾಶ ಉತ್ತೇಜನ ಮತ್ತು ಪ್ರಮಾಣೀಕರಣ ಕೇಂದ್ರ - ಇನ್‌ಸ್ಪೇಸ್ ಹಾಗೂ ಹಿಂದೂಸ್ತಾನ್ ಏರೋನಾಟಿಕಲ್ ಲಿಮಿಟೆಡ್ ಸಂಸ್ಥೆಗಳು ಸಣ್ಣ ಉಪಗ್ರಹಗಳ ಉಡಾವಣಾ ವಾಹಕ ತಂತ್ರಜ್ಞಾನದ ವರ್ಗಾವಣೆ ಕುರಿತಂತೆ ಒಪ್ಪಂದಕ್ಕೆ ಸಹಿ ಹಾಕಿವೆ. ಇಸ್ರೋ ಎಸ್‌ಎಸ್‌ಎಲ್‌ವಿ ವಾಹಕಗಳನ್ನು ವಿನ್ಯಾಸಗೊಳಿಸಲಿದೆ ಮತ್ತು ಅವುಗಳನ್ನು ಕೈಗಾರಿಕಾ ಉತ್ಪಾದನೆಗೆ ಪರಿಣಾಮಕಾರಿ ರೀತಿಯಲ್ಲಿ ಬೇಡಿಕೆಯನ್ನು ಆಧರಿಸಿ ಉತ್ಪಾದಿಸಲಾಗುವುದು. ಆ ಮೂಲಕ ಸಣ್ಣ ಉಪಗ್ರಹಗಳ ಉಡಾವಣಾ ವಾಹಕಗಳ ಜಾಗತಿಕ ಮಾರುಕಟ್ಟೆಯನ್ನು ತನ್ನ ವಶಕ್ಕೆ ತೆಗೆದುಕೊಳ್ಳುವುದು ಇದರ ಗುರಿಯಾಗಿದೆ. ಶ್ರೀಹರಿಕೋಟಾದ ಉಡಾವಣಾ ಕೇಂದ್ರದ ಮೂಲಕ ಎಸ್‌ಎಸ್‌ಎಲ್‌ವಿಗಳನ್ನು ಒದಗಿಸಲಾಗುವುದು. ಈ ಕುರಿತು ಇಸ್ರೋ ತನ್ನ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿವರವನ್ನು ನೀಡಿದ್ದು, ಇದು ರಾಷ್ಟ್ರದ ಬಾಹ್ಯಾಕಾಶ ವಲಯದ

ಸುಧಾರಣೆಗಳಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಹಾಗೂ ಎಸ್‌ಎಸ್‌ಎಲ್‌ವಿಯ ವಾಣೀಜ್ಯೀಕರಣಕ್ಕೆ ಹಾದಿ ಸುಗಮವಾಗಿದೆ ಎಂದು ಹೇಳಿದೆ.

<><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನವನ್ನು ಬೆಂಗಳೂರಿನಲ್ಲಿ ಇಂದು ಸಂಜೆ ಉದ್ಘಾಟಿಸಲಿದ್ದಾರೆ. ಈ ಸಮ್ಮೇಳನದ ಕಾರ್ಯಸೂಚಿ "ಶಾಸಕಾಂಗದ ಸದನಗಳಲ್ಲಿ ಚರ್ಚೆಗಳು ಮತ್ತು ಮಾತುಕತೆಗಳು: ಜನರ ನಂಬಿಕೆ ಮೂಡಿಸುವುದು, ಜನರ ಆಕಾಂಕ್ಷೆಗಳನ್ನು ಪೂರೈಸುವುದು" ಎಂಬುದಾಗಿದೆ. ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ಮತ್ತಿತರರು ಗಣ್ಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕರ್ನಾಟಕ ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಸ್ವಾಗತ ಭಾಷಣ ಮಾಡಲಿದ್ದಾರೆ. ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ನಡೆಯಲಿರುವ ಉದ್ಘಾಟನಾ ಸಮಾರಂಭದಲ್ಲಿ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ಶಾಸಕಾಂಗದ ಅಧ್ಯಕ್ಷರು / ಸ್ಪೀಕರ್‌ಗಳನ್ನು ಒಳಗೊಂಡ ಪೀಠಾಧ್ಯಕ್ಷರು ಭಾಗವಹಿಸಲಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಈ ವರ್ಷದ ಸ್ವಾತಂತ್ರ್ಯೋತ್ಸವ ದಿನದಂದು ಕೆಂಪುಕೋಟೆಯಿಂದ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳನ್ನು ಪ್ರಕಟಿಸಿದ್ದರು. ಇದೇ ೩ ರಂದು ನಡೆದ ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಆ ಸುಧಾರಣೆಗಳನ್ನು ಅನುಷ್ಠಾನಗೊಳಿಸುವ ಕುರಿತು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಮಂಡಳಿಯ ನಿರ್ಧಾರದಿಂದಾಗಿ ಹಲವು ವಲಯಗಳಲ್ಲಿ ತೆರಿಗೆ ಹೊರೆ ಗಮನಾರ್ಹವಾಗಿ ಇಳಿಕೆಯಾಗಿ ಜನಸಾಮಾನ್ಯರಿಗೆ ಹೆಚ್ಚಿನ ಅನುಕೂಲವಾಗಲಿದೆ. ಅದರಲ್ಲೂ ವಿಶೇಷವಾಗಿ ಗೃಹ ಬಳಕೆ ವಿದ್ಯುನ್ಮಾನ ಸಾಧನಗಳ ಬೆಲೆ ಇಳಿಕೆಯಿಂದ ಮಧ್ಯಮ ವರ್ಗಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಹವಾನಿಯಂತ್ರಿತ ಯಂತ್ರಗಳು, ಡಿಶ್ ವಾಷರ್‌ಗಳು, ಎಲ್‌ಸಿಡಿ, ಎಲ್‌ಇಡಿ ಟಿವಿಗಳ ತೆರಿಗೆ ಶೇಕಡ ೨೮ ರಿಂದ ೧೮ಕ್ಕೆ ಇಳಿಕೆ ಮಾಡಲಾಗಿದೆ. ಇದರಿಂದಾಗಿ ಗೃಹ ಬಳಕೆ ವಸ್ತುಗಳ ಮೇಲಿನ ಬೇಡಿಕೆ ಹೆಚ್ಚಳವಾಗುವುದಲ್ಲದೇ ಮಾರುಕಟ್ಟೆಯೂ ವೃದ್ಧಿಯಾಗಲಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನಿನ್ನೆ ಕತಾರ್‌ನ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ಅವರೊಂದಿಗೆ ದೂರವಾಣಿ ಮೂಲಕ ಸಮಾಲೋಚನೆ ನಡೆಸಿ ದೋಹಾದಲ್ಲಿ ಇತ್ತೀಚೆಗೆ ನಡೆದ ದಾಳಿಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದರು.

<><><>

ದುಬೈನಲ್ಲಿ ಕಳೆದ ರಾತ್ರಿ ನಡೆದ ಏಷ್ಯಾಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾರತ ತಂಡ, ಯುಎಇ ವಿರುದ್ಧ ೯ ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿ ಶುಭಾರಂಭ ಮಾಡಿದೆ. ಮೊದಲು ಬ್ಯಾಟ್ ಮಾಡಿದ ಯುಎಇ ೧೩.೧ ಓವರ್‌ಗಳಲ್ಲಿ ೫೭ ರನ್‌ಗಳಿಸಿ ಆಲ್‌ಔಟ್ ಆಯಿತು. ಕುಲ್‌ದೀಪ್ ಯಾದವ್ ಒಂದೇ ಓವರ್‌ನಲ್ಲಿ ೩ ವಿಕೆಟ್ ಸೇರಿದಂತೆ ಒಟ್ಟು ೪ ವಿಕೆಟ್ ಕಬಳಿಸಿದರು. ಅದೇ ರೀತಿ ಆಲ್‌ರೌಂಡರ್ ಶಿವಂದುಬೆ ೧೦ ಎಸೆತಗಳಲ್ಲಿ ೩ ವಿಕೆಟ್ ಪಡೆದು ಗೆಲುವಿಗೆ ಕಾಣಿಕೆ ನೀಡಿದರು. ೫೮ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಭಾರತ ತಂಡ ೪.೩ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೬೦ ರನ್‌ಗಳಿಸಿ ಗೆಲುವಿನ ನಗೆ ಬೀರಿತು. ಅಭಿಷೇಕ್ ಶರ್ಮಾ ಮತ್ತು ಶುಭ್‌ಮನ್‌ಗಿಲ್ ಅವರು ಉತ್ತಮ ಪ್ರದರ್ಶನ ನೀಡಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>